**All India Radio: Bangalore**
**National Bulletin In Kannada**
**21.01.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.01.2025 13.10 p.m.**

**<><><><>**

ಮುಖ್ಯಾಂಶಗಳು

1. ಅಮೆರಿಕಾ ಅಧ್ಯಕ್ಷರಾಗಿ ಪದಗ್ರಹಣ ಮಾಡಿದ ಡೊನಾಲ್ಡ್ ಟ್ರಂಪ್‌ಗೆ ಪ್ರಧಾನಿ ನರೇಂದ್ರ ಮೋದಿ ಸೇರಿ ಜಾಗತಿಕ ನಾಯಕರಿಂದ ಶುಭಾಶಯ
2. ಇಂದಿನಿಂದ ಪುದುಚೇರಿಯಲ್ಲಿ ದಕ್ಷಿಣ ಭಾರತ ವಿಜ್ಞಾನ ಮೇಳ; ಸುಸ್ಥಿರ ಭವಿಷ್ಯಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಘೋಷವಾಕ್ಯ
3. ಬೆಳಗಾವಿಯಲ್ಲಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆ; ಗಾಂಧಿಜೀ ಪ್ರತಿಮೆ ಅನಾವರಣಗೊಳಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ
4. ದೆಹಲಿ ವಿಧಾನಸಭಾ ಚುನಾವಣೆ; ಬಿಜೆಪಿಯಿಂದ ಎರಡನೇ ಪ್ರಣಾಳಿಕೆ ಬಿಡುಗಡೆ
5. ೧೯ ವರ್ಷದೊಳಗಿನ ವಿಶ್ವಕಪ್ ಟಿ-೨೦ ಮಹಿಳಾ ಕ್ರಿಕೆಟ್; ಭಾರತ-ಮಲೇಷ್ಯಾ ಮುಖಾಮುಖಿ

<><><><>

ಅಮೆರಿಕದ ೪೭ನೇ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭಾರತದ ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಉಭಯ ದೇಶಗಳಿಗೆ ಪ್ರಯೋಜನವಾಗುವಂತೆ ಮತ್ತು ಜಗತ್ತಿಗೆ ಉತ್ತಮ ಭವಿಷ್ಯವನ್ನು ರೂಪಿಸಲು ನಿಕಟವಾಗಿ ಕಾರ್ಯ ನಿರ್ವಹಿಸಲು ಎದುರು ನೋಡುತ್ತಿರುವುದಾಗಿ ಪ್ರಧಾನಿ ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಅಮೇರಿಕಾ ಅಧ್ಯಕ್ಷ ಟ್ರಂಪ್ ಅವರ ಮುಂದಿನ ಅವಧಿ ಯಶಸ್ವಿಯಾಗಲಿ ಎಂದು ಅವರು ಹಾರೈಸಿದ್ದಾರೆ. ಟ್ರಂಪ್ ಅವರಿಗೆ ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರು ಶುಭ ಹಾರೈಸಿದ್ದಾರೆ. ಇಟಲಿ ಮತ್ತು ಅಮೇರಿಕಾ ನಡುವಿನ ಸಹಯೋಗವನ್ನು ಬಲಪಡಿಸಲು ಸಹಕಾರಿಯಾಗಿವೆ ಎಂದು ಹೇಳಿದ್ದಾರೆ. ಜರ್ಮನ್ ಚಾನ್ಸೆಲರ್ ಓಲಾಫ್ ಸ್ಕೋಲ್ಜ್ ಅವರು ಟ್ರಂಪ್ ಅವರನ್ನು ಅಭಿನಂದಿಸಿದ್ದಾರೆ. ಅಮೆರಿಕ ಜರ್ಮನಿಯ ಆಪ್ತ ಮಿತ್ರ ಮತ್ತು ಅವರ ನೀತಿಯ ಗುರಿ ಯಾವಾಗಲೂ ಉತ್ತಮವಾಗಿದೆ ಎಂದು ಹೇಳಿದರು. ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್, ಬ್ರಿಟನ್ ಮತ್ತು ಅಮೇರಿಕಾ ನಡುವಿನ ವಿಶೇಷ ಸಂಬಂಧವು ಮುಂಬರುವ ವರ್ಷಗಳಲ್ಲಿ ಪ್ರವರ್ಧಮಾನಕ್ಕೆ ಬರಲಿದೆ ಎಂದು ಹೇಳಿದ್ದಾರೆ. ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡಾ ಸಿಲ್ವಾ ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಬ್ರೆಜಿಲ್ ಮತ್ತು ಅಮೇರಿಕಾ ನಡುವಿನ ಸಂಬಂಧಗಳು ಪರಸ್ಪರ ಗೌರವ ಮತ್ತು ಐತಿಹಾಸಿಕ ಸ್ನೇಹವನ್ನು ಆಧರಿಸಿದ ಸಹಕಾರದಿಂದ ಗುರುತಿಸಲ್ಪಟ್ಟಿವೆ ಎಂದು ಹೇಳಿದ್ದಾರೆ. ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ತಮ್ಮ ಶುಭಾಶಯಗಳನ್ನು ಸಲ್ಲಿಸುತ್ತಾ, ಜಾಗತಿಕ ಸವಾಲುಗಳನ್ನು ನಿಭಾಯಿಸಲು ಬಣವು ಅವರೊಂದಿಗೆ ನಿಕಟವಾಗಿ ಕೆಲಸ ಮಾಡಲು ಎದುರು ನೋಡುತ್ತಿದೆ ಎಂದು ತಿಳಿಸಿದ್ದಾರೆ. ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಕೂಡ ಟ್ರಂಪ್‌ಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ, ಅಮೇರಿಕಾ ಅಧ್ಯಕ್ಷ ಟ್ರಂಪ್ ಯಾವಾಗಲೂ ನಿರ್ಣಾಯಕ ಪಾತ್ರವಹಿಸುತ್ತಿದ್ದು, ಅಮೆರಿಕದ ನಾಯಕತ್ವವನ್ನು ಬಲಪಡಿಸಲು ಹಾಗೂ ಶಾಂತಿ ಸ್ಥಾಪಿಸಲು ಅವಕಾಶವನ್ನು ಕಲ್ಪಿಸಲಿದೆ ಎಂದು ಹೇಳಿದ್ದಾರೆ.

<><><><>

ದಕ್ಷಿಣ ಭಾರತದ ಶಾಲೆಗಳಿಂದ ಅತ್ಯುತ್ತಮ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಪ್ರದರ್ಶಿಸುವ ನಿಟ್ಟಿನಲ್ಲಿ ದಕ್ಷಿಣ ಭಾರತ ವಿಜ್ಞಾನ ಮೇಳ ೨೦೨೫ ಇಂದು ಪುದುಚೇರಿಯ ಗೌಬರ್ಟ್ ಅವೆನ್ಯೂದ ಓಲ್ಡ್ ಪೋರ್ಟ್ ಮೈದಾನದಲ್ಲಿ ಪ್ರಾರಂಭವಾಗಿದೆ. ಪುದುಚೇರಿ ಲೆಫ್ಟಿನೆಂಟ್ ಗವರ್ನರ್ ಕೆ. ಕೈಲಾಶನಾಥನ್ ಮೇಳವನ್ನು ಉದ್ಘಾಟಿಸಲಿದ್ದಾರೆ. ಮುಖ್ಯಮಂತ್ರಿ ಎನ್. ರಂಗಸಾಮಿ, ವಿಧಾನಸಭಾ ಸ್ಪೀಕರ್ ಸೆಲ್ವಂ ಆರ್ ಮತ್ತು ಶಿಕ್ಷಣ ಸಚಿವ ಎ. ನಮಸ್ಶಿವಾಯಂ ಪಾಲ್ಗೊಂಡಿದ್ದಾರೆ. ಐದು ದಿನಗಳ ಕಾಲ ನಡೆಯಲಿರುವ ಈ ಕಾರ್ಯಕ್ರಮವನ್ನು ಪುದುಚೇರಿಯ ಶಾಲಾ ಶಿಕ್ಷಣ ನಿರ್ದೇಶನಾಲಯ ಬೆಂಗಳೂರಿನ ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತುಸಂಗ್ರಹಾಲಯದ ಸಹಯೋಗದೊಂದಿಗೆ ಆಯೋಜಿಸಿದೆ. ಈ ವರ್ಷದ ವಿಜ್ಞಾನ ಮೇಳದ ಘೋಷವಾಕ್ಯ "ಸುಸ್ಥಿರ ಭವಿಷ್ಯಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನ" ಎಂಬುದಾಗಿದೆ. ಪ್ರತಿ ಆರು ವರ್ಷಗಳಿಗೊಮ್ಮೆ ಆಯೋಜಿಸಲಾಗುವ ದಕ್ಷಿಣ ಭಾರತ ವಿಜ್ಞಾನ ಮೇಳವು ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಭೂಮಿ ಮತ್ತು ಬಾಹ್ಯಾಕಾಶ ವಿಜ್ಞಾನ, ಪರಿಸರ ವಿಜ್ಞಾನ, ಎಂಜಿನಿಯರಿಂಗ್, ಜೈವಿಕ ವಿಜ್ಞಾನ ಮತ್ತು ಕಂಪ್ಯೂಟರ್ ವಿಜ್ಞಾನ ಸೇರಿದಂತೆ ವ್ಯಾಪಕ ಶ್ರೇಣಿಯ ಉಪ-ವಿಷಯಗಳನ್ನು ಒಳಗೊಂಡಿದೆ.

<><><>

ಬೆಳಗಾವಿಯ ಸುವರ್ಣಸೌಧದ ಮುಂಭಾಗದಲ್ಲಿ ಇಂದು ಮಹಾತ್ಮಗಾಂಧೀಜಿ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ನೆನಪಿಗಾಗಿ ಪ್ರತಿಷ್ಠಾಪಿಸಿದ ಮಹಾತ್ಮಗಾಂಧಿ ಪ್ರತಿಮೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಚರಕ ತಿರುಗಿಸುವ ಮೂಲಕ ಅನಾವರಣಗೊಳಿಸಿದರು. ಇದೇ ವೇಳೆ, ಗದುಗಿನ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಲಾಂಛನ ಬಿಡುಗಡೆಗೊಳಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಸಭಾಪತಿ ಬಸವರಾಜ ಹೊರಟ್ಟಿ ಹಲವು ಗಣ್ಯರು ಉಪಸ್ಥಿತರಿದ್ದರು.

<><><>

ದೆಹಲಿ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಇಂದು ಬಿಜೆಪಿ ಎರಡನೇ ಸಂಕಲ್ಪ ಪತ್ರ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಬಿಜೆಪಿ ನಾಯಕ ಅನುರಾಗ್ ಠಾಕೂರ್ ಸಂಕಲ್ಪ ಪತ್ರ ಪ್ರಣಾಳಿಕೆ ಬಿಡುಗಡೆ ಮಾಡಿ, ಎಲ್‌ಕೆಜಿಯಿಂದ ಸ್ನಾತಕೋತ್ತರ ಪದವಿವರೆಗೆ ಉಚಿತ ಶಿಕ್ಷಣ ಭರವಸೆ ನೀಡಿದ್ದಾರೆ.

**ಧ್ವನಿ : ಅನುರಾಗ್ ಠಾಕೂರ್**

ಜೊತೆಗೆ ಪರಿಶಿಷ್ಟ ವಿದ್ಯಾರ್ಥಿಗಳಿಗೆ ಒಂದು ಸಾವಿರ ಪ್ರೋತ್ಸಾಹ ಧನ ನೀಡುವುದಾಗಿ ಘೋಷಿಸಿದೆ. ಯುವಕರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ೧೫ ಸಾವಿರ ರೂಪಾಯಿಗಳ ಆರ್ಥಿಕ ನೆರವು ಮತ್ತು ಎರಡು ಬಾರಿ ಪ್ರಯಾಣ ಹಾಗೂ ಅರ್ಜಿ ಶುಲ್ಕ ಮರುಪಾವತಿಯ ಭರವಸೆ ನೀಡಿದೆ. ೧೦ ಲಕ್ಷ ರೂಪಾಯಿಗಳ ಜೀವ ವಿಮೆ, ಆಟೋ ಟ್ಯಾಕ್ಸಿ ಚಾಲಕರಿಗೆ ೫ ಲಕ್ಷ ರೂಪಾಯಿಗಳ ಅಪಘಾತ ವಿಮೆ ಮತ್ತು ವಾಹನ ವಿಮೆ ಹಾಗೂ ಅವರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡುವುದಾಗಿ ಭರವಸೆ ನೀಡಿದ್ದಾರೆ.

<><><>

ಸ್ವಿಟ್ಜರ್‌ಲ್ಯಾಂಡ್‌ನ ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆಯ ವಾರ್ಷಿಕ ಸಭೆಯಲ್ಲಿ ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ಮತ್ತು ಕೌಶಲ್ಯ ಅಭಿವೃದ್ಧಿ ಹಾಗೂ ಉದ್ಯಮಶೀಲತೆ ರಾಜ್ಯ ಸಚಿವ ಜಯಂತ್ ಚೌಧರಿ ಭಾರತದ ಮಳಿಗೆಯನ್ನು ಉದ್ಘಾಟಿಸಿದರು. ಭಾರತವು ಜಾಗತಿಕವಾಗಿ ಉತ್ತಮ ಸಹಯೋಗಗಳನ್ನು ಎದುರು ನೋಡುತ್ತಿದೆ ಎಂದು ತಿಳಿಸಿದ್ದಾರೆ. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ

ಫಡ್ನವಿಸ್ ಮತ್ತು ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಹಾಗೂ ಇತರ ಭಾರತೀಯ ನಾಯಕರು ಉಪಸ್ಥಿತರಿದ್ದರು.

**ಧ್ವನಿ : ಚಿರಾಗ್ ಪಾಸ್ವಾನ್**

<><><>

ಭಾರತದ ಆರ್ಥಿಕ ಅಭಿವೃದ್ಧಿಯಲ್ಲಿ ಕೃಷಿ ಭವಿಷ್ಯದ ಅತ್ಯುತ್ತಮ ವಲಯ ಎಂದು ಮುಖ್ಯ ಆರ್ಥಿಕ ಸಲಹೆಗಾರ ಡಾ. ವಿ. ಅನಂತ ನಾಗೇಶ್ವರನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಎಕ್ಸಿಮ್ ಬ್ಯಾಂಕ್ ವಾರ್ಷಿಕ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೃಷಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರಗಳಿಗೆ ಭೂಮಿಯನ್ನು ಮರುಹಂಚಿಕೆ ಮಾಡುವ ಮಹತ್ವವನ್ನು ಒತ್ತಿ ಹೇಳಿದರು. ಮಾಹಿತಿ ತಂತ್ರಜ್ಞಾನ - ಸಕ್ರಿಯಗೊಳಿಸಿರುವ ಸೇವೆಗಳಲ್ಲಿ ಭಾರತದ ಹೆಚ್ಚಿನ ರಫ್ತು ಪಾಲನ್ನು ಡಾ. ನಾಗೇಶ್ವರನ್ ಪ್ರಸ್ತಾಪಿಸಿದರು. ದೇಶವು ಜಿಡಿಪಿಯಲ್ಲಿ ತನ್ನ ಉತ್ಪಾದನಾ ಪಾಲನ್ನು ಹೆಚ್ಚಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ತಿಳಿಸಿದರು.

<><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ಛತ್ತೀಸ್‌ಗಢದ ರಾಜಧಾನಿ ರಾಯ್‌ಪುರಕ್ಕೆ ಒಂದು ದಿನದ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ ಉಪರಾಷ್ಟ್ರಪತಿಗಳು ರಾಯ್‌ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ - ಎನ್‌ಐಟಿ , ಭಿಲಾಯಿಯ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ), ರಾಯ್‌ಪುರದ ಭಾರತೀಯ ನಿರ್ವಹಣಾ ಸಂಸ್ಥೆಯ(ಐಐಎಂ) ವಿದ್ಯಾರ್ಥಿಗಳೊಂದಿಗೆ "ಉತ್ತಮ ಭಾರತವನ್ನು ನಿರ್ಮಿಸುವ ಚಿಂತನೆಗಳು" ವಿಷಯದ ಕುರಿತ ಸಂವಾದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

<><><>

ಛತ್ತೀಸ್‌ಗಢ-ಒಡಿಶಾ ಗಡಿಯಲ್ಲಿ ನಿನ್ನೆ ರಾತ್ರಿ ನಡೆದ ಕಾರ್ಯಾಚರಣೆಯಲ್ಲಿ ಕನಿಷ್ಠ ೧೪ ಮಾವೋವಾದಿಗಳು ಸಾವನ್ನಪ್ಪಿದ್ದಾರೆ. ಕುಲ್ಹರಿಘಾಟ್ ಮೀಸಲು ಅರಣ್ಯ ಪ್ರದೇಶದಲ್ಲಿ ಹೆಚ್ಚಿನ ಸಂಖ್ಯೆಯ ಮಾವೋವಾದಿಗಳು ಇರುವ ಬಗ್ಗೆ ಗುಪ್ತಚರ ಮಾಹಿತಿ ಪಡೆದ ನಂತರ, ಛತ್ತೀಸ್‌ಗಢ ಮತ್ತು ಒಡಿಶಾ ಪೊಲೀಸರು ಹಾಗೂ ಸಿಆರ್‌ಪಿಎಫ್ ಸಿಬ್ಬಂದಿ ಜಂಟಿ ಅಂತರರಾಜ್ಯ ಕಾರ್ಯಾಚರಣೆ ನಡೆಸಿದ್ದಾರೆ. ಛತ್ತೀಸ್‌ಗಢದ ಗರಿಯಾಬಂಧ್ ಜಿಲ್ಲೆ ಮತ್ತು ಒಡಿಶಾದ ನುವಾಪಾಡಾ ಜಿಲ್ಲೆಯ ಗಡಿ ಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಸಲಾಯಿತು. ಕಳೆದ ೨೪ ಗಂಟೆಗಳಲ್ಲಿ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವೆ ಗುಂಡಿನ ಚಕಮಕಿ ಮುಂದುವರೆದಿದೆ.

<><><>

ನಾಗಾಲ್ಯಾಂಡ್ ಮುಖ್ಯಮಂತ್ರಿ ನೀಫಿಯು ರಿಯೊ ಅವರು ಮಣಿಪುರ, ಮೇಘಾಲಯ ಮತ್ತು ತ್ರಿಪುರದ ಜನರಿಗೆ ಇಂದು ರಾಜ್ಯ ಸಂಸ್ಥಾಪನಾ ದಿನದ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ರಿಯೊ ಅವರು ಈ ರಾಜ್ಯಗಳಲ್ಲಿ ಶಾಂತಿ, ಏಕತೆ ಮತ್ತು ಪ್ರಗತಿ ಮೇಲುಗೈ ಸಾಧಿಸಲಿ ಎಂದು ಹಾರೈಸಿದ್ದಾರೆ. ಈ ನಡುವೆ ರಾಷ್ಟ್ರಪತಿ, ಉಪರಾಷ್ಟ್ರಪತಿ ಮತ್ತು ಪ್ರಧಾನಮಂತ್ರಿ ಅವರು ಮೇಘಾಲಯ, ತ್ರಿಪುರ ಮತ್ತು ಮಣಿಪುರದ ನಿವಾಸಿಗಳಿಗೆ ಅವರ ರಾಜ್ಯೋತ್ಸವದ ಶುಭಾಶಯಗಳನ್ನು ಕೋರಿದ್ದಾರೆ.

<><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಬ್ರುಸೆಲ್ಸ್‌ನಲ್ಲಿ ಬೆಲ್ಜಿಯಂ ವಿದೇಶಾಂಗ ವ್ಯವಹಾರ ಮತ್ತು ವಿದೇಶಾಂಗ ವ್ಯಾಪಾರ ಸಚಿವ ಬರ್ನಾರ್ಡ್ ಕ್ವಿಂಟಿನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಭಾರತದ ಮುಕ್ತ ವ್ಯಾಪಾರ ಒಪ್ಪಂದದ ಪ್ರಗತಿಯನ್ನು ಉಭಯ ನಾಯಕರು ಚರ್ಚಿಸಿದರು ಮತ್ತು

ಆರ್ಥಿಕ ಸಂಬಂಧಗಳನ್ನು ಬಲಪಡಿಸಲು ವ್ಯಾಪಾರ ಸಮಸ್ಯೆಗಳಿಗೆ ಪರಿಹಾರವನ್ನು ನೀಡುವ ನೀಡುವ ಕುರಿತು ಚರ್ಚೆ ನಡೆಸಿದರು.

<><><><>

ಹತ್ತೊಂಬ್ಬತ್ತು ವರ್ಷದೊಳಗಿನ ಐಸಿಸಿ ವಿಶ್ವಕಪ್‌ನ ಮಹಿಳಾ ಟಿ-೨೦ ಕ್ರಿಕೆಟ್ ಟೂರ್ನಿಯ ಎರಡನೇ ಆವೃತ್ತಿಯಲ್ಲಿ, ಕೌಲಾಲಂಪುರದ ಬಯುಮಾಸ್ ಓವಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎ-ಗುಂಪಿನ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಭಾರತ- ಮಲೇಷ್ಯಾ ಮುಖಾಮುಖಿಯಾಗಿದ್ದು, ಟಾಸ್ ಗೆದ್ದ ಭಾರತ, ಫೀಲ್ಡಿಂಗ್ ಆಯ್ದುಕೊಂಡಿದೆ. ಇದಕ್ಕೂ ಮುನ್ನ ಇದೇ ಕ್ರೀಡಾಂಗಣದಲ್ಲಿ  ನಡೆದ ಮತ್ತೊಂದು ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡ ವಿರುದ್ಧ ಶ್ರೀಲಂಕಾ ೮೧ ರನ್‌ಗಳಿಂದ ಜಯ ಸಾಧಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>